# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ.ಜಿ.ವಿ. ಕೃಷ್ಣಮೂರ್ತಿ, ನಿವೃತ್ತ ಪ್ರಥಮ ದರ್ಜೆ ಸಹಾಯಕ, ಕಂದಾಯ ಇಲಾಖೆ ಹಾಗೂ ಹಿಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕು, ಪಾಳ್ಯ ಗ್ರಾಮ ಪಂಚಾಯಿತಿ ಮತ್ತು ರಾವಂದೂರು ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ. ಇವರ ವಿರುದ್ಧ ಶಿಸ್ತು ಕ್ರಮದ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಮೈಸೂರು ಇವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಇವರಿಗೆ ಬರೆದ ಪತ್ರ ಸಂಖ್ಯೆ: ಸಿ.ಸಿ.ಎ/40/2014-15/14164, ದಿನಾಂಕ: 30.04.2018.
2. ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಕಂಇ 49 ಬಿಡಿಪಿ 2015, ದಿನಾಂಕ: 02.02.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ ಶ್ರೀ.ಜಿ.ವಿ. ಕೃಷ್ಣಮೂರ್ತಿ, ಪ್ರಥಮ ದರ್ಜೆ ಸಹಾಯಕ, ಕಂದಾಯ ಇಲಾಖೆ, ಇವರು ಈ ಹಿಂದೆ ಮೈಸೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸಿದ್ದು ಆ ಸಂದರ್ಭದಲ್ಲಿ ಅವರು ಎಸಗಿದ್ದರೆನ್ನಲಾದ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಅವರ ವಿರುದ್ಧ ಈ ಕೆಳಗೆ ವಿವರಿಸಿದಂತೆ ಎರಡು ಇಲಾಖಾ ವಿಚಾರಣೆಗಳನ್ನು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮೈಸೂರು ಇವರು ಪ್ರಾರಂಭಿಸಿದ್ದು ಸದರಿ ನೌಕರರು 2011 ರಲ್ಲಿ ವಯೋನಿವೃತ್ತಿ ಹೊಂದಿರುವುದರಿಂದ ಸದರಿ ಇಲಾಖಾ ವಿಚಾರಣೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಹಂತದಲ್ಲಿ ಕ್ರಮ ವಹಿಸುವಂತೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಇವರು ಸರ್ಕಾರವನ್ನು ಕೋರಿರುತ್ತಾರೆ.

1. ಅವಿಭಾಜ್ಯ ಮೈಸೂರು ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಪಾಳ್ಯ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಏಳು ಆರೋಪಗಳನ್ನು ಹೊರಿಸಿ ಅವರ ವಿರುದ್ಧ ದಿನಾಂಕ: 30.06.1993 ರಲ್ಲಿ ಆರೋಪ ಪಟ್ಟಿ ಜಾರಿಮಾಡಲಾಗಿದೆ. ಹಾಗೂ ದಿನಾಂಕ: 16.08.1993 ರಂದು ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಚಾಮರಾಜ ನಗರ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದೆ. ಸದರಿ ಆರೋಪಗಳ ಪೈಕಿ ರೂ. 4,87,906/- ಗಳ ಮೊತ್ತವನ್ನು ದುರುಪಯೋಗಪಡಿಸಿಕೊಂಡಿರುವ ಆರೋಪ ಪ್ರಮುಖವಾದುದ್ದಾಗಿದೆ. ಆದರೆ ಆಪಾದಿತ ನೌಕರರು ಈ ವಿಚಾರಣೆಗೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ತನ್ನ ಬಳಿಯೇ ಇಟ್ಟುಕೊಂಡಿದ್ದು ವಿಚಾರಣೆಗೂ ಸಹ ಹಾಜರಾಗದೆ ಇದ್ದ ಕಾರಣ ವಿಚಾರಣೆಯನ್ನು ಮುಂದುವರೆಸಿರುವುದಿಲ್ಲ ಎಂದು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯಿತಿ, ಮೈಸೂರು ಇವರು ತಿಳಿಸಿರುತ್ತಾರೆ.

2. ಮುಂದುವರೆದು ಸದರಿ ನೌಕರರು ದಿನಾಂಕ: 08.12.1993 ರಿಂದ 03.11.1994 ರವರೆಗೆ ಮೈಸೂರು ಜಿಲ್ಲೆ ಪಿರಿಯಾಪಟ್ಟಣ ತಾಲ್ಲುಕು ರಾವಂದೂರು ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಹಣ ದುರುಪಯೋಗ ಪಡಿಸಿಕೊಂಡಿರುವ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆದಿದ್ದು ಸದರಿಯವರಿಂದ ರೂ. 33,109/- ಗಳನ್ನು ವಸೂಲು ಮಾಡಬೇಕಾಗಿದ್ದು ಅದರಂತೆ ಸರ್ಕಾರದಿಂದ ಅಂತಿಮ ದಂಡನಾದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಕರಣವನ್ನು ವಿವರವಾಗಿ ಪರಿಶೀಲಿಸಿದೆ. ಶ್ರೀ. ಜಿ.ವಿ. ಕೃಷ್ಣಮೂರ್ತಿ ಯವರು 2011 ನೇ ಇಸವಿಯಲ್ಲಿ ವಯೋನಿವೃತ್ತಿ ಹೊಂದಿರುತ್ತಾರೆ. ಮೊದಲನೇ ಪ್ರಕರಣದಲ್ಲಿ ದಾಖಲೆಗಳ ಅಲಭ್ಯತೆ ಕಾರಣ ಇಲಾಖಾ ವಿಚಾರಣೆ ನಡೆಯದೇ ಇರುವುದರಿಂದ ಹಾಗೂ ಪ್ರಸ್ತುತ ಯಾವುದೇ ದಾಖಲೆ ಇರುವುದಿಲ್ಲವೆಂದು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯಿತಿ ಇವರು ತಿಳಿಸಿರುವುದರಿಂದ

ಈ ಪ್ರಕರಣದಲ್ಲಿ ನಿವೃತ್ತ ನೌಕರರಿಗೆ ಯಾವುದೇ ದಂಡನೆ ವಿಧಿಸಲು ನಿಯಮಗಳ ಅನುಸಾರ ಅವಕಾಶವಿರುವುದಿಲ್ಲ. 1994 ರಲ್ಲಿ ಈ ನೌಕರರ ವಿರುದ್ಧ ಇಲಾಖಾ ವಿಚಾರಣೆ ಆರಂಭಿಸಿದ್ದು ವಿಚಾರಣಾಧಿಕಾರಿಯನ್ನು ಕೂಡಾ ನೇಮಿಸಲಾಗಿದ್ದು, ಇದುವರೆವಿಗೂ ಸುಮಾರು 25 ವರ್ಷಗಳ ನಂತರವೂ ಇಲಾಖಾ ವಿಚಾರಣೆಯು ಮುಗಿಯದೇ ಇರುವುದನ್ನು ಸರ್ಕಾರವು ಗಮನಿಸಿದೆ.

ರಾವಂದೂರು ಗ್ರಾಮ ಪಂಚಾಯಿತಿಗೆ ಸಂಬಂಧಪಟ್ಟ ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ ಪರಿಶಿಲಿಸಲಾಗಿ ಇದಕ್ಕೆ ಸಂಬಂಧಪಟ್ಟ ಇಲಾಖಾ ವಿಚಾರಣಾ ವರದಿಯ ಮೂಲ ಪ್ರತಿ ಒದಗಿಸಿರುವುದಿಲ್ಲ. ಬದಲಿಗೆ ವಿಚಾರಣಾ ವರದಿಯ ನಕಲು ಪ್ರತಿಯನ್ನು ಅಂದಿನ ವಿಚಾರಣಾಧಿಕಾರಿಯ ದೃಢೀಕರಣದೊಂದಿಗೆ ಒದಗಿಸಲಾಗಿದೆ. ಸದರಿ ವರದಿಯ ಅನುಸಾರ ಶ್ರೀ. ಜಿ.ವಿ. ಕೃಷ್ಣಮೂರ್ತಿ ರವರ ವಿರುದ್ಧ ಒಟ್ಟು ರೂ. 33,109/- ಮೊತ್ತ ದುರುಪಯೋಗ ಆಗಿರುವುದಾಗಿ ನಿರ್ಣಯಿಸಲಾಗಿದೆ. ವಿಚಾರಣಾ ವರದಿ ಯಾವ ದಿನಾಂಕದಂದು ಸಲ್ಲಿಸಲಾಗಿದೆ ಎಂಬ ಬಗ್ಗೆ ಯಾವುದೇ ದಿನಾಂಕ ನಮೂದಾಗಿರುವುದಿಲ್ಲ, ವಿಚಾರಣಾಧಿಕಾರಿಯ ನಡವಳಿ ಇರುವುದಿಲ್ಲ ಹಾಗೂ ದುರುಪಯೋಗವಾಗಿರುವ ಮೊತ್ತಕ್ಕೆ ಸಂಬಂಧಿಸಿದ ದಾಖಲೆಗಳು ಸಾಕ್ಷಿಗಳ ಹೇಳಿಕೆಗಳು, ಇತ್ಯಾದಿ ಯಾವುದೂ ಇರುವುದಿಲ್ಲ. ಆದುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮ 214 ರ ಅನುಸಾರ ನಿವೃತ್ತ ನೌಕರರಿಗೆ ದಂಡನೆ ವಿಧಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಅನುಸರಿಸಲು ಸಾಧ್ಯವಾಗುವುದಿಲ್ಲ.

ಸದರಿ ಇಲಾಖಾ ವಿಚಾರಣೆಗಳನ್ನು 1994 ರಲ್ಲಿ ಪ್ರಾರಂಭಿಸಿದ್ದು ಸದರಿ ನೌಕರರು 2011ನೇ ಇಸವಿಯಲ್ಲಿ ನಿವೃತ್ತಿ ಹೊಂದಿದ್ದು ಸುಧೀರ್ಘವಾದ ವಿಳಂಬವಾಗಿರುತ್ತದೆ. ಸದರಿ ನೌಕರರು ಕರ್ನಾಟಕ ಆಡಳಿತ ಮಂಡಳಿಯಲ್ಲಿ ಸಲ್ಲಿಸಿರುವ ಅರ್ಜಿಯಲ್ಲಿ ಮಾನ್ಯ ನ್ಯಾಯಮಂಡಳಿಯು ದಿನಾಂಕ: 30.08.2017 ರ ತೀರ್ಪಿನಲ್ಲಿ ಈ ಇಲಾಖಾ ವಿಚಾರಣೆಯನ್ನು ಮೂರು ತಿಂಗಳೊಳಗಾಗಿ ಮುಗಿಸಿ ನಿರ್ಣಯ ತೆಗೆದುಕೊಳ್ಳಬೇಕೆಂದು ಶಿಸ್ತು ಪ್ರಾಧಿಕಾರಕ್ಕೆ ನಿರ್ದೇಶನ ನೀಡಿದ್ದರೂ ಕೂಡಾ ಈ ನಿಟ್ಟಿನಲ್ಲಿ ಯಾವುದೇ ಕ್ರಮ ತೆಗೆದುಕೊಳ್ಳದೇ ಇರುವುದು ಕಂಡುಬರುತ್ತದೆ. ಈಗ ನಿವೃತ್ತ ನೌಕರರು ನ್ಯಾಯಾಲಯ ನಿಂದನಾ ಅರ್ಜಿಯನ್ನು ದಾಖಲಿಸಿದಾಗ ಈ ಹಂತದಲ್ಲಿ ಇಲಾಖಾ ವಿಚಾರಣೆಯನ್ನು ಮುಗಿಸಿ ನಿರ್ಣಯ ತೆಗೆದುಕೊಳ್ಳುವುದು ಕಷ್ಟಸಾಧ್ಯ ಇಲಾಖಾ ವಿಚಾರಣೆಯನ್ನು ಮುಗಿಸಲು ಇನ್ನಷ್ಟು ಕಾಲಾವಕಾಶ ಕೇಳಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮುಂದೆ ಹೋಗುವುದೂ ಸಮಂಜಸವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ಶ್ರೀ. ಜಿ. ವಿ. ಕೃಷ್ಣಮೂರ್ತಿ, ನಿವೃತ್ತ ಪ್ರಥಮ ದರ್ಜೆ ಸಹಾಯಕ ಇವರ ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಇವರು ಹೂಡಿರುವ ಮೇಲ್ಕಂಡ ಎರಡೂ ಇಲಾಖಾ ವಿಚಾರಣೆ ಪ್ರಕರಣಗಳಲ್ಲಿ ಮುಂದಿನ ಕ್ರಮವನ್ನು ಕೈಬಿಡಲು ಸರ್ಕಾರವು ನಿರ್ಣಯಿಸಿದೆ. ಹಾಗೂ ಸದರಿ ನೌಕರರಿಂದ ಆರ್ಥಿಕ ನಷ್ಟ ಉಂಟಾಗಿದ್ದಲ್ಲಿ ಅದನ್ನು ಸಿವಿಲ್ ದಾವೆ ಹೂಡಿ ವಸೂಲು ಮಾಡುಲು ಕ್ರಮವಹಿಸುವಂತೆ ಮುಖ್ಯಕಾರ್ಯನಿವಾರ್ಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಇವರಿಗೆ ಸೂಚಿಸಲು ಸಹ ನಿರ್ಣಯಿಸಲಾಗಿದೆ.

ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/422/ಗ್ರಾಪಂಕಾ/2015(ಪಿ-1), ಬೆಂಗಳೂರು, ದಿನಾಂಕ-23-03-2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ.ಜಿ.ವಿ. ಕೃಷ್ಣಮೂರ್ತಿ, ನಿವೃತ್ತ ಪ್ರಥಮ ದರ್ಜೆ ಸಹಾಯಕ, ಕಂದಾಯ ಇಲಾಖೆ ಹಾಗೂ ಹಿಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ತಾಲ್ಲೂಕು, ಪಾಳ್ಯ ಗ್ರಾಮ ಪಂಚಾಯಿತಿ ಮತ್ತು ರಾವಂದೂರು ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ. ಇವರ ವಿರುದ್ಧ ಹೂಡಲಾಗಿದ್ದ ಪ್ರಸ್ತಾವನೆಯಲ್ಲಿ ವಿವರಿಸಲಾದ ಎರಡೂ ಇಲಾಖಾ ವಿಚಾರಣೆಗಳ ಸಂಬಂಧ ಮುಂದಿನ ಕ್ರಮವನ್ನು ಕೈಬಿಡಲಾಗಿದೆ.

ಸದರಿ ನೌಕರರಿಂದ ಆರ್ಥಿಕ ನಷ್ಟ ಉಂಟಾಗಿದ್ದಲ್ಲಿ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಹೂಡಲು ಕ್ರಮ ವಹಿಸುವಂತೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಮೈಸೂರು ಇವರಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

23/3/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ. ಮೈಸೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಾಮರಾಜನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
7. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.
8. ಶ್ರೀ.ಜಿ.ವಿ. ಕೃಷ್ಣಮೂರ್ತಿ, ನಂ 102, ಬಿ ಬ್ಲಾಕ್, 1ನೇ ಸ್ಟೇಜ್, 5ನೇ ಮುಖ್ಯರಸ್ತೆ, 15ನೇ ಕ್ರಾಸ್, ಜೆ.ಪಿ ನಗರ, ಮೈಸೂರು – 570 008.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
10. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.